**Akashvani : Bangalore**
**Regional Bulletin In Kannada**
**10.01.2025 / 14.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**10.01.2025 / 14.30 hrs**

**<><*<><>*><>**

ಮುಖ್ಯಾಂಶಗಳು

೧. ಶರಣಾಗತ ನಕ್ಸಲರ ಶಸ್ತ್ರಾಸ್ತ್ರ ಪತ್ತೆಗೆ ಪ್ರಕ್ರಿಯೆ ನಡೆಯಲಿದೆ - ಗೃಹ ಸಚಿವರ ಹೇಳಿಕೆ

೨. ಬಾಣಂತಿಯರ ಸಾವಿನ ಪ್ರಕರಣ ಹಿನ್ನೆಲೆ; ಡ್ರಗ್ ಅಂಡ್ ಕಾಸ್ಮೆಟಿಕ್ ಕಾಯ್ದೆ ೧೯೪೦ಕ್ಕೆ ತಿದ್ದುಪಡಿ ಕೋರಿ ಆರೋಗ್ಯ ಸಚಿವರಿಂದ ಕೇಂದ್ರಕ್ಕೆ ಮನವಿ

೩. ಹೊಸ ಕೈಗಾರಿಕಾ ನೀತಿಯ ಮೂಲಕ ಹಿಂದುಳಿದ ಜಿಲ್ಲೆಗಳಲ್ಲಿ ಉದ್ಯಮ ಸ್ಥಾಪನೆಗೆ ಚಿಂತನೆ - ಸಚಿವ ಎಂ.ಬಿ. ಪಾಟೀಲ್

೪. ಚೈರೋಸ್ ಭೀಮಯ್ಯ ಹಾಕಿ ಕಪ್ ೨೦೨೫; ಬೆಂಗಳೂರಿನಲ್ಲಿ ಇಂದಿನಿಂದ ಆರಂಭ

**<><*<><>*><>**

ಇತ್ತೀಚೆಗೆ ಮುಖ್ಯಮಂತ್ರಿಗಳ ಎದುರು ಶರಣಾಗತರಾಗಿರುವ ಆರು ಜನರೇ ಕೊನೆಯ ನಕ್ಸಲರು ಎಂದು ತಿಳಿದುಬಂದಿದ್ದು, ಹೊರಗಿನಿಂದ ಬೇರೆಯವರು ಪ್ರವೇಶಿಸದಂತೆ ನಿಗಾ ಇಡಲಾಗುವುದು ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಕ್ಸಲರಿಗೆ ಪರಿಹಾರ ಮತ್ತು ಪುನರ್‌ವಸತಿ ಕಲ್ಪಿಸುವ ವಿಚಾರದಲ್ಲಿ ತೋರಿದ ಮುತುವರ್ಜಿಯನ್ನು ಅವರ ಬಳಿ ಇರಬಹುದಾಗಿದ್ದ ಶಸ್ತ್ರಾಸ್ತ್ರಗಳನ್ನು ಹುಡುಕುವುದರಲ್ಲಿ ಸರ್ಕಾರ ತೋರುತ್ತಿಲ್ಲ ಎಂದು ಬಿಜೆಪಿ ಆರೋಪಿಸುತ್ತಿರುವುದು ಸೂಕ್ತವಲ್ಲ ಎಂದರು. ನಕ್ಸಲರು ಅಡಗಿಸಿಟ್ಟಿರು ಶಸ್ತ್ರಾಸ್ತ್ರಗಳನ್ನು ಪತ್ತೆಮಾಡಲಾಗುವುದು. ಇದಕ್ಕೆ ಪ್ರಕ್ರಿಯೆಯನ್ನು ಅನುಸರಿಸಬೇಕಾಗುತ್ತದೆ, ಪೊಲೀಸರು ಈ ಕೆಲಸ ಮಾಡುತ್ತಾರೆ ಎಂದರು. ನಕ್ಸಲ್ ಗುಂಪಿನ ಒಬ್ಬಾತನ ನಾಪತ್ತೆ ಬಗ್ಗೆ ಅವರು ಪ್ರತಿಕ್ರಿಯಿಸಿ, ಶರಣಾಗತರಾಗಿರುವ ಗುಂಪಿನವರು ಆತನನ್ನು ಹೊರಗಾಕಿದ್ದರು ಎನ್ನುವ ಮಾಹಿತಿ ಇದೆ. ಇದರ ಕಾರಣ ಪತ್ತೆಗೆ ತನಿಖೆ ನಡೆಯುತ್ತಿದೆ. ಈಗ ನಕ್ಸಲರು ಶರಣಾಗತರಾಗಿರುವ ಪ್ರಕರಣ ಮತ್ತು ವಿಕ್ರಮ್ ಗೌಡ ಪ್ರಕರಣ ಎರಡೂ ಬೇರೆ ಬೇರೆ ಎಂದು ಸಚಿವ ಪರಮೇಶ್ವರ್ ಹೇಳಿದರು.

**<><*<><>*><>**

ರಾಜ್ಯದಲ್ಲಿ ಬಾಣಂತಿಯರ ಸಾವಿನ ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಕಳಪೆ ಔಷಧ ತಯಾರಿಕೆ ಮತ್ತು ಪೂರೈಕೆಯನ್ನು ತಡೆಯಲು ಡ್ರಗ್ ಅಂಡ್ ಕಾಸ್ಮೆಟಿಕ್ ಕಾಯ್ದೆ ೧೯೪೦ಕ್ಕೆ ತಿದ್ದುಪಡಿ ತರಬೇಕು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿದ್ದಾರೆ. ಈ ಕುರಿತು ಕೇಂದ್ರ ಆರೋಗ್ಯ ಸಚಿವ ಜೆ.ಪಿ. ನಡ್ಡಾ ಅವರಿಗೆ ಪತ್ರ ಬರೆದಿರುವ ಸಚಿವರು ಕಳೆದ

ಡಿಸೆಂಬರ್‌ನಲ್ಲಿ ಬಳ್ಳಾರಿ ಆಸ್ಪತ್ರೆಯಲ್ಲಿ ಐವರು ಬಾಣಂತಿಯರು ಮೃತಪಟ್ಟಿದ್ದರು. ಅದಕ್ಕೆ ಪಶ್ಚಿಮಬಂಗಾಳ ಮೂಲದ ಔಷಧ ಉತ್ಪಾದನೆ ಮತ್ತು ಪೂರೈಕೆ ಸಂಸ್ಥೆ ಪೂರೈಸಿದ್ದ ಲ್ಯಾಕ್ಟೇಟ್ ರಿಂಗರ್ ದ್ರಾವಣದ ಗುಣಮಟ್ಟ ಸರಿ ಇಲ್ಲದ್ದೇ ಕಾರಣ ಎಂಬ ಅಂಶ ಪತ್ತೆಯಾಗಿತ್ತು. ಕಳೆದ ಎರಡು ವರ್ಷಗಳಲ್ಲಿ ರಾಜ್ಯದಲ್ಲಿ ೮೯೪ ಔಷಧ ಮಾದರಿಗಳನ್ನು ಪರಿಶೀಲಿಸಲಾಗಿದ್ದು, ಈ ಪೈಕಿ ೭೦೧ ಮಾದರಿಗಳು ಹೊರರಾಜ್ಯದ್ದಾಗಿವೆ. ಈ ಅಂತರವನ್ನು ನಿವಾರಿಸಲು ಕೇಂದ್ರೀಕೃತ ಡೇಟಾಬೇಸ್‌ಅನ್ನು ರಚಿಸಬೇಕು. ಎಲ್ಲಾ ಕೇಂದ್ರ ಮತ್ತು ರಾಜ್ಯ ಪ್ರಯೋಗಾಲಯಗಳಿಂದ ಔಷಧ ಪರೀಕ್ಷೆಗಳನ್ನು ನಡೆಸಬೇಕು ಎಂದು ಮನವಿ ಮಾಡಿದ್ದಾರೆ. ಪರೀಕ್ಷೆಯ ವೇಳೆ ಔಷಧಿಗಳು ಕಳಪೆ ಗುಣಮಟ್ಟದ್ದು ಎಂದು ಕಂಡುಬಂದರೆ ರಾಜ್ಯಗಳು ಅವುಗಳನ್ನು ನಿಷೇಧಿಸಬಹುದು. ಆದರೆ ಕ್ರಿಮಿನಲ್ ಮೊಕದ್ದಮೆಗೆ ಸಮಯ ತೆಗೆದುಕೊಳ್ಳುವ ಕಾರಣ ತಯಾರಕರು ಔಷಧಿಗಳ ಉತ್ಪಾದನೆ ಮತ್ತು ಮಾರಾಟವನ್ನು ಮುಂದುವರಿಸುತ್ತಿದ್ದಾರೆ. ಇದು ಸಾರ್ವಜನಿಕರ ಆರೋಗ್ಯಕ್ಕೆ ಅಪಾಯ ಉಂಟುಮಾಡುತ್ತದೆ. ಕೇಂದ್ರೀಕೃತ ಡೇಟಾಬೇಸ್ ರಚನೆಯಾದಲ್ಲಿ ದೇಶಾದ್ಯಂತ ಔಷಧಿ ತಯಾರಕರ ಗುಣಮಟ್ಟದ ಇತಿಹಾಸ ಪತ್ತೆಹಚ್ಚಲು ಅನುಕೂಲವಾಗುತ್ತದೆ ಎಂದೂ ಸಹ ವಿವರಿಸಿದ್ದಾರೆ. ಈಗ ಇರುವ ಕಾಯ್ದೆಯಂತೆ ಯಾವುದೇ ಔಷಧ ಉತ್ಪಾದನೆ ಘಟಕ ಸ್ಥಾಪನೆಗೆ ಅನುಮತಿ ಹಾಗೂ ಸಂದರ್ಭ ಬಂದಾಗ ಘಟಕಗಳ ಪರೀಶೀಲನೆ ನಡೆಸುವ ಅಧಿಕಾರ ಆಯಾ ರಾಜ್ಯದ ಔಷಧ ನಿಯಂತ್ರಕ ಅಧಿಕಾರಿಗಳಿಗೆ ಮಾತ್ರ ಇದೆ. ಯಾವ ಸಂಸ್ಥೆ ಕಪ್ಪು ಪಟ್ಟಿಗೆ ಸೇರಿದೆ ಎಂಬ ಮಾಹಿತಿ ರಾಜ್ಯಗಳಿಗೆ ದೊರೆಯುತ್ತಿಲ್ಲ ಎಂದು ದಿನೇಶ್ ಗುಂಡೂರಾವ್ ತಮ್ಮ ಪತ್ರದಲ್ಲಿ ಬರೆದಿದ್ದಾರೆ. ೧೯೪೦ರ ಸಂಬಂಧಿತ ಕಾಯ್ದೆಗೆ ತಿದ್ದುಪಡಿ ತಂದಲ್ಲಿ ಗುಣಮಟ್ಟ ಕಾಯ್ದುಕೊಳ್ಳದ ಔಷಧ ಸಂಸ್ಥೆಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು ಸಾಧ್ಯವಾಗುತ್ತದೆ ಎಂದು ಸಚಿವರು ವಿವರಿಸಿದ್ದಾರೆ.

**<><*<><>*><>**

ಉಪರಾಷ್ಟ್ರಪತಿ ಜಗದೀಪ್ ಧನಕರ್ ಬೆಂಗಳೂರಿಗೆ ನಾಳೆ ಒಂದು ದಿನದ ಅಧಿಕೃತ ಭೇಟಿ ನೀಡಲಿದ್ದಾರೆ. ರಾಜ್ಯ ಲೋಕಸೇವಾ ಆಯೋಗದ ಅಧ್ಯಕ್ಷರುಗಳ ೨೫ನೇ ರಾಷ್ಟ್ರೀಯ ಸಮಾವೇಶವನ್ನು ಅವರು ಉದ್ಘಾಟಿಸಲಿದ್ದಾರೆ. ನಂತರ ಬಿಇಎಲ್‌ನಲ್ಲಿ ಸಂಶೋಧನೆ ಮತ್ತು ಅಭಿವೃದ್ಧಿ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪಾಲ್ಗೊಳ್ಳುತ್ತಾರೆ. ಆನಂತರ ಬಿಎಚ್‌ಇಎಲ್‌ಗೆ ಭೇಟಿ ನೀಡಿ, ವಿಜ್ಞಾನಿಗಳು ಹಾಗೂ ಸಿಬ್ಬಂದಿಯೊಂದಿಗೆ ಸಂವಾದ ನಡೆಸಲಿದ್ದಾರೆ. ಉಪರಾಷ್ಟ್ರಪತಿಗಳು ನಾಳೆ ಸಂಜೆ ದೆಹಲಿಗೆ ಹಿಂದಿರುಗಲಿದ್ದಾರೆ.

**<><*<><>*><>**

೭೭ನೇ ಸೇನಾ ದಿನಾಚರಣೆಯ ಅಂಗವಾಗಿ ಭಾರತೀಯ ಸೇನೆ ಬೆಂಗಳೂರಿನಲ್ಲಿ ಇದೇ ೧೫ರಂದು ವಿಶೇಷ ಕಾರ್ಯಕ್ರಮವನ್ನು ಆಯೋಜಿಸಿದೆ ಎಂದು ಕರ್ನಾಟಕ ಮತ್ತು ಕೇರಳ ಪ್ರಾಂತ್ಯದ ಸೇನಾ ವಿಭಾಗದ ಕಮಾಂಡಂಟ್ ಅವರಾದ ಮೇಜರ್ ಜನರಲ್ ವಿ.ಟಿ. ಮ್ಯಾಥ್ಯೂ ಆಕಾಶವಾಣಿಗೆ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಇಂದು ಬೆಳಗ್ಗೆ ನಡೆದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿ, ಮಾಣೆಕ್ ಷಾ ಪರೇಡ್ ಮೈದಾನದಲ್ಲಿ ಅಂದು ಸೇನಾ ಶಸ್ತ್ರಾಸ್ತ್ರಗಳ ಪ್ರದರ್ಶನ, ಭಾರತೀಯ ಸೇನೆಗೆ ಸಂಬಂಧಿಸಿದ ಸಮಗ್ರ ಮಾಹಿತಿ ಹಾಗೂ ರಾಷ್ಟ್ರಭಕ್ತಿಯ ಹಲವು ಕಾರ್ಯಕ್ರಮಗಳು ನಡೆಯಲಿವೆ ಎಂದರು. ಈ ಕಾರ್ಯಕ್ರಮಕ್ಕೆ ಸಾರ್ವಜನಿಕರಿಗೆ ಉಚಿತ ಪ್ರವೇಶವಿರುತ್ತದೆ. ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಬೇಕೆಂದು ಅವರು ಮನವಿ ಮಾಡಿದರು.

<><*<><>*><>

ನಂಜುಂಡಪ್ಪ ವರದಿಯನ್ನು ಆಧರಿಸಿ ಹೊಸ ಕೈಗಾರಿಕಾ ನೀತಿ ಮೂಲಕ ಹಿಂದುಳಿದ ಜಿಲ್ಲೆಗಳಿಗೆ ಹೊಸ ಕೈಗಾರಿಕೆಗಳನ್ನು ತರಲು ಯೋಜಿಸಲಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ತಿಳಿಸಿದ್ದಾರೆ. ಹೊಸಪೇಟೆಯಲ್ಲಿ ಇಂದು ಅವರು ಸುದ್ದಿಗಾರರೊಂದಿಗೆ ಮಾತನಾಡಿ, ಉದ್ಯಮಗಳನ್ನು ಸ್ಥಾಪಿಸುವ ಮೂಲಕ ಹಿಂದುಳಿದ ಜಿಲ್ಲೆಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಉದ್ಯೋಗ ಸೃಷ್ಟಿಯಾಗಲಿದೆ. ವಿಶೇಷವಾಗಿ ಮಹಿಳೆಯರಿಗೆ ಉದ್ಯೋಗಾವಕಾಶಗಳು ದೊರೆಯುವಂತೆ ನೋಡಿಕೊಳ್ಳಲಾಗುವುದು ಎಂದು ಸಚಿವರು ತಿಳಿಸಿದರು.

<><*<><>*><>

ವೈಕುಂಠ ಏಕಾದಶಿ ಅಂಗವಾಗಿ ರಾಜ್ಯದ ಬಹುತೇಕ ಎಲ್ಲ ದೇವಾಲಯಗಳಲ್ಲಿ ಇಂದು ವಿಶೇಷ ಪೂಜೆ ನಡೆಯುತ್ತಿದೆ. ಎಲ್ಲೆಡೆ ಶ್ರದ್ಧಾಳುಗಳು ಸರತಿ ಸಾಲಿನಲ್ಲಿ ಸಾಗಿ ದೇವರ ದರ್ಶನ ಪಡೆಯುತ್ತಿದ್ದಾರೆ. ಎಲ್ಲಾ ದೇವಸ್ಥಾನಗಳನ್ನು ಹೂವುಗಳು ಮತ್ತು ವಿದ್ಯುತ್ ದೀಪಗಳಿಂದ ಸುಂದರವಾಗಿ ಅಲಂಕರಿಸಲಾಗಿದೆ. ಹಲವೆಡೆ ಜನರು ಮತ್ತು ಸಂಚಾರ ದಟ್ಟಣೆಯ ನಿರ್ವಹಣೆಗೆ ಸೂಕ್ತ ವ್ಯವಸ್ಥೆ ಮಾಡಲಾಗಿದೆ. ಎಲ್ಲೆಡೆ ಬೆಳಗಿನಜಾವದಿಂದಲೇ ಭಜನೆ, ಹರಿಕಥೆ, ವಿಷ್ಣು ಸಹಸ್ರನಾಮ ಕಾರ್ಯಕ್ರಮಗಳು ನಡೆಯುತ್ತಿವೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಪ್ರಮುಖ ದೇವಾಲಯಗಳಲ್ಲಿ ಇಂದು ಬೆಳಗಿನ ಜಾವದಿಂದಲೇ ವಿಶೇಷ ಪೂಜೆ ಕಾರ್ಯಕ್ರಮಗಳಲ್ಲಿ ಜನರು ಸಂಭ್ರಮದಿಂದ ಪಾಲ್ಗೊಂಡಿದ್ದಾರೆ. ಚಿಕ್ಕಮಗಳೂರು ನಗರದ ವೆಂಕಟೇಶ್ವರಸ್ವಾಮಿ ದೇವಸ್ಥಾನ, ಹಿರೇಮಗಳೂರಿನ ಕೋದಂಡರಾಮಸ್ವಾಮಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಮತ್ತು ದರ್ಶನದ ವ್ಯವಸ್ಥೆ ಮಾಡಲಾಗಿದೆ. ಕೋಲಾರ ಜಿಲ್ಲೆಯಾದ್ಯಂತ ಇಂದು ಮುಂಜಾನೆಯಿಂದ ವೈಕುಂಠ ಏಕಾದಶಿ ಆಚರಣೆಯ ಸಂಭ್ರಮ ಮನೆ ಮಾಡಿದೆ. ಚಿಕ್ಕತಿರುಪತಿ ದೇವಸ್ಥಾನವನ್ನು ವಿಶೇಷವಾಗಿ ಅಲಂಕರಿಸಲಾಗಿದೆ.

ದಾವಣಗೆರೆ ಜಿಲ್ಲೆಯಾದ್ಯಂತ ವೈಕುಂಠ ಏಕಾದಶಿಯನ್ನು ಸಂಭ್ರಮದಿಂದ ಆಚರಿಸಲಾಗುತ್ತಿದೆ. ಬೇತೂರು ರಸ್ತೆಯ ವೆಂಕಟೇಶ್ವರಸ್ವಾಮಿ ರಥೋತ್ಸವದಲ್ಲಿ ಸಾವಿರಾರು ಭಕ್ತಾದಿಗಳು ಭಾಗವಹಿಸಿದ್ದರು. ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿ ತಾಲೂಕು ಗಡಿದಂ ಶ್ರೀವೆಂಕಟರಮಣಸ್ವಾಮಿ ದೇವಾಲಯ ಸೇರಿದಂತೆ ವಿವಿಧ ದೇವಾಲಯಗಳಲ್ಲಿ ನೂರಾರು ಜನರು ವಿಶೇಷ ಪೂಜೆಗಳಲ್ಲಿ ಭಾಗವಹಿಸಿದ್ದರು.

<><*<><>*><>

ಬಹು ನಿರೀಕ್ಷಿತ ಆರನೇ ಆವೃತ್ತಿಯ ಚೈರೋಸ್ ಭೀಮಯ್ಯ ಹಾಕಿ ಕಪ್ ೨೦೨೫ ಬೆಂಗಳೂರಿನಲ್ಲಿ ಇಂದಿನಿಂದ ಆರಂಭವಾಗಿದೆ. ಫೀಲ್ಡ್ ಮಾರ್ಷಲ್ ಕೆ.ಎಂ. ಕರಿಯಪ್ಪ ಹಾಕಿ ಅರೇನಾದಲ್ಲಿ ಪಂದ್ಯಗಳು ನಡೆಯುತ್ತವೆ. ಕರ್ನಾಟಕ ಹಾಕಿ ಅಸೋಸಿಯೇಷನ್ ಹಾಗೂ ಕೂರ್ಗ್ ಚಾಲೆಂಜರ್ಸ್ ಚಿಕ್‌ಪೆಟ್ ಅಸೋಸಿಯೇಷನ್ ಸಹಯೋಗದಲ್ಲಿ ಈ ಪಂದ್ಯಾವಳಿಯನ್ನು ಆಯೋಜಿಸಲಾಗಿದೆ. ಒಟ್ಟು ೧೮೦ ಆಟಗಾರರನ್ನು ಒಳಗೊಂಡ ೨೦ ತಂಡಗಳು ಭಾಗವಹಿಸಲಿದ್ದು, ನಾಡಿದ್ದನ ವರೆಗೆ ಪಂದ್ಯಗಳು ನಡೆಯುತ್ತವೆ. ಭಾನುವಾರ ಅಂತಿಮ ಪಂದ್ಯ ನಡೆಯಲಿದ್ದು, ಹಿರಿಯ ಹಾಕಿ ಪಟುಗಳಾದ ಎಂ.ಪಿ. ಗಣೇಶ್ ಮತ್ತು ಧನರಾಜ್ ಪಿಳ್ಳೈ ವಿಜೇತ ತಂಡಕ್ಕೆ ಬಹುಮಾನ ವಿತರಿಸಲಿದ್ದಾರೆ.

<><*<><>*><>

ಜವಾಹರ ನವೋದಯ ವಿದ್ಯಾಲಯ ಸಮಿತಿ ನಡೆಸುವ ೨೦೨೫-೨೬ನೇ ಸಾಲಿನ ಆರನೇ ತರಗತಿ ಪ್ರವೇಶ ಪರೀಕ್ಷೆ ಇದೇ ೧೮ರಂದು ನಡೆಯಲಿದೆ. ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು navodaya.gov.in ವೆಬ್‌ಸೈಟ್ ಮೂಲಕ ಪ್ರವೇಶ ಪತ್ರಗಳನ್ನು ಪಡೆಯಬಹುದು. ೧೮ರಂದು ಬೆಳಗ್ಗೆ ೧೧.೩೦ ರಿಂದ ೧.೩೦ರ ವರೆಗೆ ಪರೀಕ್ಷೆ ನಡೆಯುವುದು. ಎಲ್ಲಾ ವಿದ್ಯಾರ್ಥಿಗಳು ಮತ್ತು ಪೋಷಕರು ಪ್ರವೇಶ ಪತ್ರದಲ್ಲಿ ನಮೂದಿಸಿರುವ ಸೂಚನೆಗಳನ್ನು ಅನುಸರಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

<><*<><>*><>

ಸಂಕ್ರಾಂತಿ ಹಬ್ಬದ ಪ್ರಯುಕ್ತ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ವಿಶೇಷ ಹೆಚ್ಚುವರಿ ಸಾರಿಗೆ ವ್ಯವಸ್ಥೆಯನ್ನು ಇಂದಿನಿಂದ ಆರಂಭಿಸಿದೆ. ಹಬ್ಬದ ವೇಳೆ ವಾರಾಂತ್ಯವು ಒಟ್ಟಾಗಿ ಬಂದಿರುವುದರಿಂದ ರಾಜ್ಯ ಮತ್ತು ಅಂತಾರಾಜ್ಯ ಪ್ರಯಾಣಿಕರ ದಟ್ಟಣೆ ನಿರ್ವಹಣೆಗಾಗಿ ಈ ವಿಶೇಷ ಬಸ್ಸುಗಳು ಕಾರ್ಯಾಚರಣೆ ನಡೆಸಲಿವೆ. ಬೆಂಗಳೂರು ಮತ್ತು ಇತರ ಪ್ರಮುಖ ಸ್ಥಳಗಳಿಂದ ಹಬ್ಬದ ನಂತರವೂ ಇದೇ ೧೪ ಮತ್ತು ೧೫ರಂದು ಈ ಹೆಚ್ಚುವರಿ ಬಸ್ಸುಗಳ ಸಂಚಾರ ಇರುತ್ತದೆ ಎಂದು ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಪ್ರಕಟಣೆಯಲ್ಲಿ ತಿಳಿಸಲಾಗಿದೆ. ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ವ್ಯಾಪ್ತಿಯ ಹುಬ್ಬಳ್ಳಿ, ಧಾರವಾಡ, ಗದಗ, ಬೆಳಗಾವಿ, ಉತ್ತರಕನ್ನಡ, ಹಾವೇರಿ, ಚಿಕ್ಕೋಡಿ ಮತ್ತು ಬಾಗಲಕೋಟೆ ವಿಭಾಗಗಳಿಂದ ಅಂದಾಜು ೧೧೪ ಹೆಚ್ಚುವರಿ ವಿಶೇಷ ಬಸ್ಸುಗಳು ಕಾರ್ಯಾಚರಣೆ ನಡೆಸುತ್ತವೆ ಎಂದು ಮಾಹಿತಿ ನೀಡಲಾಗಿದೆ.

<><*<><>*><>

ದಕ್ಷಿಣ ಕನ್ನಡ ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ತೋಟಗಾರಿಕೆ ಇಲಾಖೆ ವತಿಯಿಂದ ಮಂಗಳೂರಿನ ಕದ್ರಿ ಉದ್ಯಾನದಲ್ಲಿ ಇದೇ ೨೩ ರಿಂದ ೨೬ರ ವರೆಗೆ ಫಲಪುಷ್ಪ ಪ್ರದರ್ಶನವನ್ನು ಆಯೋಜಿಸಲಾಗಿದೆ. ಅಂದಾಜು ೨೦ ಸಾವಿರಕ್ಕೂ ಅಧಿಕ ಹೂವಿನ ಗಿಡಗಳನ್ನು ಪ್ರದರ್ಶಿಸಲಾಗುವುದು. ಹೂವುಗಳು ಮತ್ತು ಸಿರಿಧಾನ್ಯಗಳಿಂದ ವಿವಿಧ ಕಲಾಕೃತಿಗಳನ್ನು ಪ್ರದರ್ಶಿಸಲಾಗುವುದು.

<><*<><>*><>

ಮಕರ ಸಂಕ್ರಾಂತಿ ಹಬ್ಬದ ಅಂಗವಾಗಿ ಹರಿಹರದಲ್ಲಿ ತುಂಗಭದ್ರಾ ನದಿಯ ಎರಡೂ ದಂಡೆಗಳನ್ನು ಸ್ವಚ್ಛಗೊಳಿಸಲಾಗುತ್ತಿದೆ. ಸಂಕ್ರಾಂತಿ ಸಂದರ್ಭದಲ್ಲಿ ಸಾವಿರಾರು ಜನರು ಪವಿತ್ರ ಸ್ನಾನಕ್ಕೆ ಆಗಮಿಸುವುದರಿಂದ, ಕಳೆದ ಎರಡು ತಿಂಗಳಿನಿಂದ ಪ್ರತಿ ಭಾನುವಾರಗಳಂದು ಸ್ವಚ್ಛತಾ ಕಾರ್ಯಾಚರಣೆಯನ್ನು ನಡೆಸಲಾಗುತ್ತಿದೆ ಎಂದು ನಮ್ಮ ದಾವಣಗೆರೆ ಜಿಲ್ಲಾ ಪ್ರತಿನಿಧಿ ವರದಿ ಮಾಡಿದ್ದಾರೆ.

<><*<><>*><>

ಸಂಕ್ಷಿಪ್ತ ಸುದ್ದಿಗಳು

೧. ಮುಂದಿನ ತಿಂಗಳು ಬೆಂಗಳೂರಿನಲ್ಲಿ ನಡೆಯಲಿರುವ ಏರೋ ಇಂಡಿಯಾ ೨೦೨೫ರ ಪೂರ್ವಭಾವಿ ಸಭೆ ದೆಹಲಿಯಲ್ಲಿಂದು ನಡೆಯುವುದು. ರಕ್ಷಣಾ ಸಚಿವ ರಾಜನಾಥ್ ಸಿಂಗ್, ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಈ ಬಾರಿ ಪಾಲ್ಗೊಳ್ಳಲಿರುವ ೧೫೦ಕ್ಕೂ ಹೆಚ್ಚು ಮಿತ್ರರಾಷ್ಟ್ರಗಳ ರಾಯಭಾರಿಗಳನ್ನು ಸಭೆಗೆ ಆಹ್ವಾನಿಸಲಾಗಿದೆ.

೨. ಮಂಡ್ಯ ಜಿಲ್ಲಾ ಪಂಚಾಯತ್ ಸಿಇಒ ಶೇಖ್ ತನ್ವೀರ್ ಆಸಿಫ್ ಇಂದು ಕೆ.ಆರ್.ಪೇಟೆ ತಾಲೂಕು ತೆಂಡೇಕೆರೆ ಗ್ರಾಮದ ಸರ್ಕಾರಿ ಪ್ರೌಢಶಾಲೆಗೆ ಭೇಟಿ ನೀಡಿದರು. ಮಕ್ಕಳ ಹಾಜರಾತಿ, ಶೈಕ್ಷಣಿಕ ಪ್ರಗತಿ ಬಗ್ಗೆ ಪರಿಶೀಲಿಸಿದರು.

೩. ಉತ್ತರ ಕನ್ನಡ ಜಿಲ್ಲೆಯಲ್ಲಿ ಮಳೆಗಾಲದಲ್ಲಿ ಅಪಾಯಕ್ಕೊಳಗಾಗುವ ಸ್ಥಳಗಳಲ್ಲಿ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಮಳೆಗಾಲದ ಪೂರ್ವಭಾವಿ ವಿಪತ್ತು ನಿರ್ವಹಣಾ ಸಭೆಯನ್ನು ಇಂದು ನಡೆಸಲಾಯಿತು.

೪. ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ಮಹಾಕುಂಭಮೇಳ-೨೦೨೫ ಇದೇ ೧೩ ರಿಂದ ಆರಂಭವಾಗಲಿದ್ದು, ಅಂತಿಮ ಹಂತದ ಸಿದ್ಧತೆಗಳು ಭರದಿಂದ ನಡೆದಿವೆ. ಪುಷ್ಯಮಾಸದ ಹುಣ್ಣಿಮೆಯಂದು ಪವಿತ್ರ ಅಮೃತಸ್ನಾನದೊಂದಿಗೆ ಮಹಾಕುಂಭಮೇಳ ಆರಂಭವಾಗಿ ಮಹಾಶಿವರಾತ್ರಿಯಂದು ಕೊನೆಯ ಪವಿತ್ರ ಅಮೃತಸ್ನಾನ ನಿಗದಿಯಾಗಿದೆ. ಮುಖ್ಯಮಂತ್ರಿ ಯೋಗಿ ಆದಿನ್ಯನಾಥ ಇಂದು ಪ್ರಯಾಗ್‌ರಾಜ್‌ನಲ್ಲಿ ವಿಶೇಷ ಆಕಾಶವಾಣಿ ವಾಹಿನಿಯನ್ನು ಉದ್ಘಾಟಿಸಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**